ಸಮಾಚಾರ ಸಣ್ಣದಲ್ಲ

ಏ.18ಕ್ಕೆ ಪ್ರಿಯಾಂಕಾ ನಾಮಪತ್ರ ಸಲ್ಲಿಕೆ

ಚಿಕ್ಕೋಡಿ: ಚಿಕ್ಕೋಡಿ ಲೋಕಸಭೆ ಕ್ಷೇತ್ರದಿಂದ ಕಾಂಗ್ರೆಸ್ ಪಕ್ಷದ ಅಭ್ಯರ್ಥಿಯಾಗಿ ನಾನು ಏಪ್ರಿಲ್ 18 ರಂದು ನಾಮಪತ್ರವನ್ನು ಸರಳ ರೀತಿಯಲ್ಲಿ ಸಲ್ಲಿಸಲಿದ್ದೇನೆ. ಕಾರಣ ತಾವೆಲ್ಲರೂ ಸಹಕರಿಸಬೇಕು ಎಂದು ಚಿಕ್ಕೋಡಿ ಲೋಕಸಭೆ ಕ್ಷೇತ್ರದಿಂದ ಕಾಂಗ್ರೆಸ್ ಪಕ್ಷದ ಅಭ್ಯರ್ಥಿ ಪ್ರಿಯಾಂಕಾ ಜಾರಕಿಹೊಳಿ ಅವರು ತಿಳಿಸಿದ್ದಾರೆ. ಈ ಕುರಿತು ಪ್ರಕಟಣೆಯಲ್ಲಿ ತಿಳಿಸಿದ ಅವರು, ಏಪ್ರಿಲ್ 18 ರಂದು ನಾಮಪತ್ರವನ್ನು ಸರಳ ರೀತಿಯಲ್ಲಿ ಸಲ್ಲಿಸಲಿದ್ದೇನೆ. ಅಂದು ಕೆಲವೇ ಕೆಲವು ಜನಪ್ರತಿನಿಧಿಗಳು ನನಗೆ ಸಾಥ್ ನೀಡಲಿದ್ದಾರೆ. ಸುಡು ಬಿಸಿಲಿನಲ್ಲಿ ಕಾರ್ಯಕರ್ತರು ಹಾಗೂ ಬೃಹತ್ ರ‍್ಯಾಲಿಯಿಂದ ಸಾಮಾನ್ಯ ಜನರಿಗೆ ತೊಂದರೆಯಾಗದಂತೆ ನೋಡಿಕೊಳ್ಳಲು ತಂದೆ, ಲೋಕೋಪಯೋಗಿ ಇಲಾಖೆ ಸಚಿವ ಸತೀಶ್ ಜಾರಕಿಹೊಳಿ ಅವರು ತಿಳಿಸಿದ್ದಾರೆ. ಆದ್ದರಿಂದ ತಂದೆಯವರ ಮಾರ್ಗದರ್ಶನದಂತೆ ಸರಳವಾಗಿ ತೆರಳಿ ನಾಮಪತ್ರ ಸಲ್ಲಿಸುತ್ತೇನೆ ಎಂದು ಪ್ರಕಟಣೆ ಮೂಲಕ ತಿಳಿಸಿದ್ದಾರೆ.

ಶ್ರೀಗಳು ಸ್ಪರ್ಧಿಸುವ ದುಸ್ಸಾಹಸ ಬೇಡ

ಹುಬ್ಬಳ್ಳಿ: ಧಾರವಾಡ ಮತ ಕ್ಷೇತ್ರದಲ್ಲಿ ಮತದಾರರು ಪ್ರಲ್ಹಾದ್ ಜೋಶಿ ಅವರ ಪರವಾಗಿದ್ದಾರೆ. ಆದರೆ ಸ್ವಾಮೀಜಿಯೊಬ್ಬರು ಅವರ ವಿರುದ್ಧ ಸ್ಪರ್ಧಿಸುವ ದುಸ್ಸಾಹಸಕ್ಕೆ ಕೈ ಹಾಕಬಾರದು ಎಂದು ಯಡಿಯೂರಪ್ಪ ಹೇಳಿದರು. ಸುದ್ದಿಗಾರರೊಂದಿಗೆ ಮಾತನಾಡಿ, ರಾಜ್ಯದಲ್ಲಿ ಬಿಜೆಪಿ ಹಾಗೂ ಪ್ರಧಾನಿ ನರೇಂದ್ರ ಮೋದಿಯವರ ಅಲೆ ಇದೆ. ಪ್ರಲ್ಹಾದ್ ಜೋಶಿ ಅವರು ಪ್ರಬುದ್ಧ ರಾಜಕಾರಣಿ. ಕ್ಷೇತ್ರದಲ್ಲಿ ಸಾಕಷ್ಟು ಅಭಿವೃದ್ಧಿ ಕಾರ್ಯಗಳನ್ನು ಮಾಡಿದ್ದಾರೆ. ಅಭಿವೃದ್ಧಿ ಕಾರ್ಯಗಳೇ ಅವರ ಗೆಲುವಿಗೆ ಶ್ರೀರಕ್ಷೆಯಾಗಲಿದೆ. ಪ್ರಲ್ಹಾದ್ ಜೋಶಿ ವಿರುದ್ಧ ದಿಂಗಾಲೇಶ್ವರ ಸ್ವಾಮೀಜಿ ಸ್ಪರ್ಧೆ ಮಾಡುವ ದುಸ್ಸಾಹಸಕ್ಕೆ ಕೈ ಹಾಕಿದ್ದಾರೆ. ಸ್ವಾಮೀಜಿ ಅವರಿಗೆ ಮತ್ತೊಮ್ಮೆ ವಿನಂತಿ ಮಾಡುತ್ತೇನೆ. ತಮ್ಮ ನಿರ್ಧಾರದಿಂದ ಹಿಂದೆ ಸರಿಯಬೇಕು. ಈ ಕುರಿತು ಈಗಾಗಲೇ ಅವರೊಂದಿಗೆ ಮಾತನಾಡಿದ್ದೇನೆ. ಇನ್ನೊಮ್ಮೆ ಫೋನ್ ಕರೆ ಮೂಲಕ ಅವರನ್ನು ಮನವೊಲಿಸುವ ಕೆಲಸ ಮಾಡುವೆ ಎಂದರು.

ರಾಜಕೀಯಕ್ಕೆ ಸಾಫ್ಟ್ ಆಗಿಯೇ ಇರಬೇಕು

ಶಿವಮೊಗ್ಗ: ರಾಜಕೀಯಕ್ಕೆ ಸಾಫ್ಟ್ ಆಗಿರಬೇಕು, ರಫ್ ಆಗಿರಬಾರದು ಎಂದು ನಟ ಶಿವರಾಜಕುಮಾರ್ ಹೇಳಿದ್ದಾರೆ. ಸುದ್ದಿಗಾರರ ಜತೆ ಮಾತನಾಡಿ, ನಾನು ನಾಮಪತ್ರ ಸಲ್ಲಿಸಲು 2ನೇ ಬಾರಿ ಬಂದಿದ್ದೇನೆ. ವಾತಾರಣ ಚೆನ್ನಾಗಿದೆ. ಗೀತಾ ಅವರಿಗೆ ಆಲ್ ದಿ ಬೆಸ್ಟ್ ಹೇಳುತ್ತೇನೆ. ಜನರಿಗೆ ಬದಲಾವಣೆ ಬೇಕು ಅನಿಸಿದೆ. ನಾವು ಎಲ್ಲಾ ಕಡೆ ಪ್ರಚಾರ ಮಾಡುತ್ತಿದ್ದೇವೆ ಎಂದರು. ಎಲ್ಲಿ ಹೋದರು ನಮಗೆ ಪಾಸಿಟಿವ್ ಸಪೋರ್ಟ್ ಬರುತ್ತಿದೆ. ಅವರ ಸಂತೋಷಕ್ಕೆ ನಾನು ಹಾಡು ಹಾಡುತ್ತೇನೆ. ಅಲ್ಲಿ ಯಾವ ವಯಸ್ಸಿನವರಿಗೆ ಹೇಗೆ ಮಾತನಾಡಬೇಕೋ ಹಾಗೆ ಮಾತನಾಡುತ್ತೇನೆ. ನಾನು ನನ್ನ ಪತ್ನಿಗೆ ಒಂದು ಅವಕಾಶ ಕೊಡಿ ಎಂದು ಕೇಳುತ್ತಿದ್ದೇನೆ. ಗೀತಾ ಯಾವಾಗಲೂ ಸಾಫ್ಟ್, ರಾಜಕೀಯಕ್ಕೆ ರಫ್ ಆಗಿ ಇರಬಾರದು. ರಾಜಕೀಯಕ್ಕೆ ಸಾಫ್ಟ್ ಆಗಿರಬೇಕು. ಮಾತನಾಡುವ ಬದಲು ಕೆಲಸ ಮಾಡಬೇಕು. ಆ ಮೂಲಕ ನಮ್ಮ ಜವಾಬ್ದಾರಿ ತೋರಿಸಿಕೊಡಬೇಕು ಎಂದರು.

ಸ್ವಾಮೀಜಿ ಮತ ತ್ಯಜಿಸಿ ರಾಜಕೀಯಕ್ಕೆ ಇಳಿಯಲಿ

ಗದಗ: ದಿಂಗಾಲೇಶ್ವರ ಸ್ವಾಮೀಜಿ ಒಬ್ಬ ತಂತ್ರಗಾರ ರಾಜಕಾರಣಿಗೆ ಸಮನಾದವರು. ತಂತ್ರ- ಕುತಂತ್ರ ಮಾಡುವುದರಲ್ಲಿ ಎತ್ತಿದ ಕೈ. ಬ್ಲಾಕ್‌ಮೇಲ್ ಮಾಡುವುದರಲ್ಲೂ ನಿಸ್ಸೀಮ. ಹಾಗಾಗಿ, ಅವರು ಮಠ ತ್ಯಜಿಸಿ, ತಮ್ಮ ವ್ಯಕ್ತಿತ್ವಕ್ಕೆ ಅನುಗುಣವಾಗಿ ಯಾವುದಾದರೂ ರಾಜಕೀಯ ಪಕ್ಷ ಸೇರಿಕೊಳ್ಳಬೇಕು. ಇಲ್ಲವಾದರೆ ಭಕ್ತರೇ ಅವರನ್ನು ತ್ಯಜಿಸುತ್ತಾರೆ ಎಂದು ಸಾಹಿತಿ ಬಸವರಾಜ ಸೂಳಿಬಾವಿ ತಿಳಿಸಿದರು. ಸುದ್ದಿಗಾರರೊಂದಿಗೆ ಮಾತನಾಡಿ, ಧಾರವಾಡ ಲೋಕಸಭಾ ಕ್ಷೇತ್ರದಿಂದ ಪಕ್ಷೇತರನಾಗಿ ಸ್ಪರ್ಧಿಸುತ್ತೇನೆ. ನನ್ನ ವಿರೋಧ ಇರುವುದು ಪ್ರಲ್ಹಾದ್ ಜೋಶಿ ವಿರುದ್ಧವೇ ಹೊರತು, ಬಿಜೆಪಿ ಮೇಲಲ್ಲ ಅನ್ನುತ್ತಾರೆ. ಜೋಶಿ ಅವರಿಂದ ಲಿಂಗಾಯತರಿಗೆ ಅನ್ಯಾಯ ಆಗಿದೆ ಅನ್ನುತ್ತಾರೆ. ಆದರೆ, ಯಾವ ರೀತಿ ಅನ್ಯಾಯ ಆಗಿದೆ? ಎಲ್ಲಿಲ್ಲಿ ಅನ್ಯಾಯ ಆಗಿದೆ? ಎಂಬ ವಿಷಯಗಳನ್ನು ಸ್ಪಷ್ಟಪಡಿಸುವುದಿಲ್ಲ. ಅಂಕಿ ಸಂಖ್ಯೆಗಳ ಸಮೇತವಾಗಿ ಆರೋಪ ಮಾಡಿದರೆ ಅದಕ್ಕೊಂದು ಅರ್ಥ ಇರುತ್ತದೆ ಎಂದು ಹೇಳಿದರು.

ಕಾಂಗ್ರೆಸ್ ಜತೆ ರಾಘವೇಂದ್ರ ಹೊಂದಾಣಿಕೆ ರಾಜಕಾರಣ

ಶಿವಮೊಗ್ಗ: ನಾನು ಗೆಲ್ಲುತ್ತೇನೆ ಎಂಬ ಭಯ ಹುಟ್ಟಿದ್ದರಿಂದ ಕಾಂಗ್ರೆಸ್ ಮತ್ತು ಬಿ.ವೈ. ರಾಘವೇಂದ್ರ ಹೊಂದಾಣಿಕೆಯ ರಾಜಕಾರಣ ಮಾಡುತ್ತಿದ್ದಾರೆ ಎಂದು ಬಿಜೆಪಿ ಬಂಡಾಯ ಅಭ್ಯರ್ಥಿ ಕೆ.ಎಸ್. ಈಶ್ವರಪ್ಪ ಆರೋಪಿಸಿದ್ದಾರೆ. ಸುದ್ದಿಗಾರರೊಂದಿಗೆ ಮಾತನಾಡಿ, ಅವರಿಬ್ಬರು ಹೊಂದಾಣಿಕೆ ಮಾಡಿಕೊಂಡಿದ್ದಾರೆ. ಇದಕ್ಕೆ ಸಾಕ್ಷಿ ಎಂಬಂತೆ ಕ್ಷೇತ್ರದಲ್ಲಿ ಕಾಂಗ್ರೆಸ್‌ನ ಒಬ್ಬೆ ಒಬ್ಬ ಕಾರ್ಯಕರ್ತರು ಪ್ರಚಾರ ಮಾಡಿದ್ದು ಕಂಡಿಲ್ಲ, ಅಭ್ಯರ್ಥಿಪರ ಪಾಂಪ್ಲೆಟ್‌ಗಳನ್ನು ಹಂಚಿದ್ದು ನೋಡಿಲ್ಲ. ಅವರು ಒಬ್ಬರಿಗೊಬ್ಬರು ಟೀಕೆ ಮಾಡಿಕೊಳ್ಳದೇ ನನ್ನನ್ನು ಮಾತ್ರ ಟೀಕಿಸುತ್ತಿದ್ದಾರೆ. ನನಗೆ ಯುವಕರಿಂದ ಹಿಡಿದು ಪ್ರತಿಯೊಬ್ಬರ ಬೆಂಬಲ ಸಿಗುತ್ತಿದೆ ಎಂದರು.

ಗ್ಯಾರಂಟಿ ಯೋಜನೆಯಿಂದ ಖಜಾನೆ ಖಾಲಿಯಾಗಿಲ್ಲ | ಬಿಜೆಪಿಯ ಸುಳ್ಳನ್ನು ಜನ ನೋಡಿದ್ದಾರೆ | ಈ ಬಾರಿ 20 ಸೀಟು ಗೆಲ್ಲುವುದು ನಿಶ್ಚಿತ

ಸಿದ್ದು ಸವಾಲು ಸ್ವೀಕರಿಸಲೇಕೆ ಹಿಂಜರಿಕೆ?

ದೇಶ ಕಂಡಿರುವ ಅಪರೂಪದ ಮುಖ್ಯಮಂತ್ರಿಗಳಲ್ಲಿ ಸಿದ್ದರಾಮಯ್ಯ ಮುಂಚೂಣಿಯಲ್ಲಿ ನಿಲ್ಲಲಿದ್ದಾರೆ. ಕೇಂದ್ರದಿಂದ ರಾಜ್ಯಕ್ಕೆ ಬರಬೇಕಿರುವ ಅನುದಾನ ಸರಿಯಾಗಿ ಬಂದಿದ್ದರೆ, ಅನುದಾನ ತಾರತಮ್ಯ ವಿಷಯದಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಹಾಕಿರುವ ಸವಾಲು ಸ್ವೀಕರಿಸಲು ಕೇಂದ್ರ ಸಚಿವೆ ನಿರ್ಮಲಾ ಸೀತಾರಾಮನ್ ಅವರಿಗೇಕೆ ಹಿಂಜರಿಕೆ ಎಂದು ಕರ್ನಾಟಕ ರಾಜ್ಯ ಪ್ರವಾಸೋದ್ಯಮ ಅಭಿವೃದ್ಧಿ ನಿಗಮದ ಅಧ್ಯಕ್ಷ ಸರೋವರ ಶ್ರೀನಿವಾಸ್ ಪ್ರಶ್ನಿಸಿದ್ದಾರೆ. ವಿಶ್ವವಾಣಿಗೆ ನೀಡಿರುವ ವಿಶೇಷ ಸಂದರ್ಶನದಲ್ಲಿ ಗ್ಯಾರಂಟಿ ಯೋಜನೆಗಳ ಅನುಷ್ಠಾನ, ಲೋಕಸಭಾ ಚುನಾವಣಾ ತಯಾರಿ, ಬಿಜೆಪಿಯ ಆರೋಪ, ಚಿಕ್ಕಮಗಳೂರು-ಉಡುಪಿ ಲೋಕಸಭಾ ಕ್ಷೇತ್ರದ ಚಿತ್ರಣದ ಬಗ್ಗೆ ಮಾತನಾಡಿದ್ದಾರೆ. ಸಂದರ್ಶನದ ಪೂರ್ಣಪಾಠ ಇಲ್ಲಿದೆ.

ವಿಶ್ವವಾಣಿ ಸಂದರ್ಶನ

ರಂಜಿತ್ ಎಚ್. ಅಶ್ವತ್ಥ

● ಈ ಬಾರಿಯ ಚುನಾವಣಾ ಕಾವು ಹೇಗಿದೆ?

ದೇಶಾದ್ಯಂತ ನಡೆಯುತ್ತಿರುವ ಲೋಕಸಭಾ ಚುನಾವಣೆಯಲ್ಲಿ ಕಾಂಗ್ರೆಸ್‌ಗೆ ಪೂರಕವಾದ ವಾತಾವರಣ ಏದೆ. ಅದರಲ್ಲಿಯೂ ಕರ್ನಾಟಕ 28 ಕ್ಷೇತ್ರಗಳಲ್ಲಿ ಉತ್ತಮವಾಗಿದೆ. ನನಗೆ ಪಕ್ಷದ ವರಿಷ್ಠರ ನೀಡಿರುವ ಚಿಕ್ಕಮಗಳೂರು - ಉಡುಪಿ ಕ್ಷೇತ್ರದಲ್ಲಿ ಈಗಾಗಲೇ ಪ್ರಚಾರ ಆರಂಭಿಸಿದ್ದು, ಜಯಪ್ರಕಾಶ್ ಹೆಗ್ಡೆ ಪರವಾಗಿ ಜನರಿದ್ದಾರೆ. ಪಕ್ಷದ ಪರವಾಗಿ ವಾತಾವರಣವಿದೆ.

● ಮತದಾರರ ಬಳಿ ಹೋದಾಗ ಅಭಿಪ್ರಾಯ ಏನಿದೆ?

ವಿಧಾನಸಭಾ ಚುನಾವಣೆಯನ್ನು ಕಾಂಗ್ರೆಸ್ ನೀಡಿದ್ದ ಪಂಚಗ್ಯಾರಂಟಿಗಳನ್ನು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ನೇತೃತ್ವದ ಸರಕಾರ ಈಡೇರಿಸಿದ್ದು, ಇದಕ್ಕೆ ಜನರಲ್ಲಿ ಕೃತಜ್ಞತೆಯಿದೆ. ರಾಜ್ಯ ಸರಕಾರ ಜಾರಿಗೊಳಿಸಿರುವ ಪಂಚಗ್ಯಾರಂಟಿ ಯೋಜನೆ ಶೇ.84ರಷ್ಟು ಜನರಿಗೆ ತಲುಪಿದೆ. ಬಡತನ ರೇಖೆಗಿಂತ ಕೆಳಗಿದ್ದವರೆಲ್ಲ ಗ್ಯಾರಂಟಿ ಯೋಜನೆಯ ನೆರವಿನಿಂದ ಮಧ್ಯಮ ವರ್ಗಕ್ಕೆ ಬರುತ್ತಿದ್ದಾರೆ. ನಮ್ಮ ಗ್ಯಾರಂಟಿ ಯೋಜನೆಗಳಿಂದ ಜನರ ಜೀವನ ಮಟ್ಟ ಸುಧಾರಿಸಿದೆ ಎನ್ನುವುದಕ್ಕೆ ಇದೇ ಸಾಕ್ಷಿ.

● ತಳಮಟ್ಟದಲ್ಲಿ ಯಾವ ಅಭಿಪ್ರಾಯವಿದೆ?

ಮನೆಮನೆಗೆ ತೆರಳಿ ಪ್ರಚಾರ ಮಾಡುತ್ತಿರುವ ಸಮಯದಲ್ಲಿ ನನಗೆ ಲಭಿಸಿರುವ ಮಾಹಿತಿಯೆಂದರೆ, ಯಾವುದೇ ಪಕ್ಷ, ಧರ್ಮ, ಜಾತಿಯಿರಲಿ. ಎಲ್ಲರಿಗೂ ಸಿದ್ದರಾಮಯ್ಯ ಅವರ ಬಗ್ಗೆ ಅಪಾರವಾದ ಗೌರವವಿದೆ. ಅವರೊಬ್ಬ ಅಪರೂಪದ ರಾಜಕಾರಣಿ, ಅಪರೂಪದ ಮುಖ್ಯಮಂತ್ರಿ ಎಂದು ಹೇಳುತ್ತಿದ್ದಾರೆ. ನನ್ನ ವೈಯಕ್ತಿಕ ಅಭಿಪ್ರಾಯವೂ ಇದೇ ಆಗಿದೆ. ಇವರಂತ ಮನುಷ್ಯನನ್ನು ನಾನು ನೋಡಲಿಲ್ಲ. ಬಡವರ ಪರ, ಅಭಿವೃದ್ಧಿ ಪರವಿರುವ ಸಿದ್ದರಾಮಯ್ಯ ಅವರಿಗೆ ನಾಟಕ ಮಾಡಲು ಬರುವುದಿಲ್ಲ. ಏಕೆಂದರೆ ಅವರಿಗೆ ಬಡತನ ಅನುಭವಿಸಿ, ಉಪವಾಸ ಅನುಭವಿಸಿದ್ದಾರೆ. ಆದ್ದರಿಂದ ಜನರ ಹೊಟ್ಟೆ ತುಂಬಿಸಲು ಅನ್ನಭಾಗ್ಯ ಯೋಜನೆಯನ್ನು ಜಾರಿಗೊಳಿಸಿದರು. ಅವರು ಜಾರಿಗೊಳಿಸಿದ ಎಲ್ಲ ಭಾಗ್ಯಗಳನ್ನು ಈಡೇರಿಸಿದ್ದಾರೆ. ಚುನಾವಣಾ ಸಮಯದಲ್ಲಿ ಅವರು ನೀಡಿದ್ದ ಎಲ್ಲ ಭರವಸೆಗಳನ್ನು ಈಡೇರಿಸಿದ್ದಾರೆ.

● ಗ್ಯಾರಂಟಿಗಳಿಂದ ಸರಕಾರ ದಿವಾಳಿಯಾಯಿತು ಎಂದು ಬಿಜೆಪಿ ಹೇಳುತ್ತಿದೆಯಲ್ಲ?

ಬಿಜೆಪಿಯವರು ಸುಳ್ಳು ಪ್ರಚಾರ ಮಾಡುತ್ತಿದ್ದಾರೆ. ಗ್ಯಾರಂಟಿಗಳನ್ನು ಕೊಟ್ಟಿದ್ದಕ್ಕೆ ಖಜಾನೆ ದಿವಾಳಿಯಾಯಿತು ಎನ್ನುವ ಬಿಜೆಪಿಯವರು ಈ ಯೋಜನೆಗಳಿಂದ ಜನರಿಗಾ ಗುತ್ತಿರುವ ಲಾಭದ ಬಗ್ಗೆ ಏಕೆ ಯೋಚಿಸುವುದಿಲ್ಲ. ಗ್ಯಾರಂಟಿ ಯೋಜನೆಗಳಿಗೆ ನಾವು ಕೊಡುತ್ತಿರುವ ಅನುದಾನ ಪರೋಕ್ಷವಾಗಿ ಸರಕಾರಕ್ಕೆ ವಾಪಾಸು ಲಾಭವಾಗುತ್ತಿದೆ. ಉದಾಹರಣೆಗೆ, ಉಚಿತ ಬಸ್ ಯೋಜನೆಯಿಂದ ಮಹಿಳೆಯರು ದೇವಾಲಯಗಳಿಗೆ ತೆರಳುತ್ತಿದ್ದಾರೆ. ಅಲ್ಲಿ ಹುಂಡಿಗೆ ಹಣ ಹಾಕುತ್ತಾರೆ. ಇದರೊಂದಿಗೆ ಪ್ರವಾಸೋದ್ಯಮ ಕ್ಷೇತ್ರಗಳಿಗೆ ಜನ ಹೆಚ್ಚೆಚ್ಚು ಬಂದಷ್ಟು, ಸ್ಥಳೀಯವಾಗಿ ಉದ್ಯೋಗ ಸೃಷ್ಟಿ ಹೆಚ್ಚಾಗಲಿದೆ. ಇದರಿಂದ ಸರಕಾರಕ್ಕೆ ವಾರ್ಷಿಕವಾಗಿ ಕೋಟ್ಯಂತರ ರುಪಾಯಿ ಹಣ ವಾಪಸಾಗುತ್ತದೆ. ಬಿಜೆಪಿಯವರು ಹೇಳುತ್ತಿರುವಂತೆ ನಾವೇನು ದಿವಾಳಿಯಾಗಿಲ್ಲ. ಆದರೆ ಒಂದು ವೇಳೆ ದಿವಾಳಿಯಾಗುವ ಹಂತಕ್ಕೆ ಬಂದರೆ ಅದಕ್ಕೆ ಬಿಜೆಪಿಯ ಕೇಂದ್ರ ಸರಕಾರವೇ ಕಾರಣ. ನಮಗೆ ಬರಬೇಕಿರುವ 1.87 ಲಕ್ಷ ಕೋಟಿ ನಮಗೆ ಕೊಟ್ಟಿಲ್ಲ. ಒಂದು ವೇಳೆ ಕೊಟ್ಟಿದ್ದರೆ ರಾಜ್ಯದ ಅಭಿವೃದ್ಧಿ ಇನ್ನಷ್ಟು ವೇಗವಾಗಿರುತ್ತಿತ್ತು.

● ಕೇಂದ್ರದಿಂದ ಯಾವುದೇ ಬಾಕಿಯುಳಿದಿಲ್ಲ ಎನ್ನುವ ಮಾತಿದೆಯಲ್ಲ?

ಬಿಜೆಪಿಯವರು ಬರೀ ಸುಳ್ಳು ಹೇಳಿಕೊಂಡೇ ಓಡಾಡುತ್ತಿದ್ದಾರೆ. ಅನುದಾನ ಬಾಕಿಯಿದೆ, ಇಲ್ಲ ಎನ್ನುವ ಬಗ್ಗೆ ಚರ್ಚಿಸಲು ಆರ್ಥಿಕ ಸಚಿವೆ ನಿರ್ಮಲಾ ಸೀತಾರಾಮನ್ ಅವರೊಂದಿಗೆ ಬಹಿರಂಗ ಚರ್ಚೆಗೆ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಆಹ್ವಾನ ನೀಡಿದ್ದಾರೆ. ಆದರೆ ಈವರೆಗೆ ಅವರೇಕೆ ಬಂದಿಲ್ಲ? ಬಹಿರಂಗ ಚರ್ಚೆಯಲ್ಲಿ ಭಾಗವಹಿಸಿ ಯಾರದ್ದು ಸುಳ್ಳು, ಯಾರದ್ದು ಸತ್ಯವೆಂದು ಹೇಳಬಹುದಾಗಿತ್ತು. ಆದರೆ ಅದಕ್ಕೆ ಏಕೆ ಅವರು ತಯಾರಿಲ್ಲ?

● ಬಿಜೆಪಿಯ ಭದ್ರಕೋಟೆಯನ್ನು ಹೇಗೆ ಭೇದಿಸುವಿರಿ?

ಬಿಜೆಪಿ ಬಿಜೆಪಿ ಎಂದು ಹೇಳುವವರೇ ಬಿಜೆಪಿ ಪರವಾಗಿಲ್ಲ. ಸ್ವತಃ ಬಿಜೆಪಿ ಕಾರ್ಯಕರ್ತರೇ ಪಕ್ಷದ ಬೆಳವಣಿಗೆ ಬಗ್ಗೆ ಬೇಸರವ್ಯಕ್ತಪಡಿಸಿದ್ದಾರೆ. ಮೋದಿ ನನಗೇನಾಗಿದೆ? ಒಂದು ದೇವಾಲಯ ಕಟ್ಟಿಸಿ, ಪ್ರತಿಮೆ ನಿಲ್ಲಿಸಿದರೆ ಬಡವರ ಹೊಟ್ಟೆ ತುಂಬುವುದಿಲ್ಲ. ಹಾಗೆಂದು ನಾವು ದೇವಸ್ಥಾನದ ವಿರೋಧಿಗಳಲ್ಲ. ಆದರೆ ಅದೊಂದೇ ಮಾಡುವುದರಿಂದ ಬಡವರ ಹೊಟ್ಟೆ ತುಂಬುವುದಿಲ್ಲವಲ್ಲ. ಈ ಮಾತನ್ನು ಕಾಂಗ್ರೆಸಿಗರು ಮಾತ್ರವಲ್ಲದೇ, ಬಿಜೆಪಿ ಕಾರ್ಯಕರ್ತರೇ ಹೇಳುತ್ತಿದ್ದಾರೆ.

● ಗ್ಯಾರಂಟಿ ಯೋಜನೆ ಸ್ಥಗಿತವಾಗುತ್ತದೆ ಎನ್ನುವ ಆರೋಪವಿದೆಯಲ್ಲ?

ಬಿಜೆಪಿಯವರು ನಮ್ಮ ಗ್ಯಾರಂಟಿ ಯೋಜನೆಗಳ ಬಗ್ಗೆ ಮಾತನಾಡುವ ಮೊದಲು ಅವರು ಏನು ಮಾಡಿದ್ದಾರೆ ಎನ್ನುವುದನ್ನು ಹೇಳಲಿ. ಪ್ರತಿಯೊಬ್ಬರ ಖಾತೆಗೆ 15 ಲಕ್ಷ ಹಾಕುವುದಾಗಿ ಹೇಳಿದರು. ಹೇಳಿ ದಶಕ ಕಳೆದರೂ ಯಾರಿಗೂ ದುಡ್ಡು ಬಂದಿಲ್ಲವೇಕೆ? ಪೆಟ್ರೋಲ್, ಡಿಸೇಲ್ ಸೇರಿದಂತೆ ನಿತ್ಯಬಳಕೆಯ ವಸ್ತುಗಳ ಬೆಲೆ ಇಳಿಸುವುದಾಗಿ ಹೇಳಿದರು. ಚುನಾವಣಾ ಸಮಯದಲ್ಲಿ ಒಂದೆರೆಡು ರುಪಾಯಿ ಇಳಿಸಿ ದಂತೆ ಮಾಡಿ, ಅಧಿಕಾರಕ್ಕೆ ಬರುತ್ತಿದ್ದಂತೆ ಅದನ್ನು ಏರಿಸುವುದನ್ನು ನಾವು ನೋಡಿಲ್ಲವೇ?

● ಕಾಂಗ್ರೆಸ್‌ಗೆ ಮತ ಏಕೆ ನೀಡಬೇಕು?

ಕಾಂಗ್ರೆಸ್‌ನಿಂದ ಆಗಿರುವ ಉಪಯೋಗ ಬಿಜೆಪಿಯಿಂದ ಬಡವರಿಗೆ ಆಗಿಲ್ಲ. ಕರ್ನಾಟಕದಲ್ಲಿ ನಾವು ಕೊಟ್ಟಿರುವ ಯೋಜನೆಗಳನ್ನೇ ಕಾಪಿ ಮಾಡಿ ಬೇರೆ ರಾಜ್ಯಗಳಲ್ಲಿ ಘೋಷಿಸಿರುವ ಬಿಜೆಪಿಯವರಿಂದ ಯಾರಿಗೆ ಲಾಭವಾಗಿದೆ ಹೇಳಿ. ಗ್ಯಾರಂಟಿ ಯೋಜನೆಗಳಿಗೆ ನಾಂದಿ ಹಾಡಿದ್ದೇ ನಾವಲ್ಲವೇ? ಕರ್ನಾಟಕದಲ್ಲಿ ಬಿಜೆಪಿಯಿದ್ದಾಗ ರಾಜ್ಯದಲ್ಲಿದ್ದ ಭ್ರಷ್ಟಚಾರಕ್ಕೆ ಮುಖ್ಯಮಂತ್ರಿಯನ್ನೇ ಬದಲಿಸಬೇಕಾದ ಪರಿಸ್ಥಿತಿ ನಿರ್ಮಾಣವಾಗಿತ್ತು. ಯಾವುದೇ ಕಚೇರಿಗೆ ಹೋದರೂ, ಭ್ರಷ್ಟಾಚಾರ ತಾಂಡವವಾಡುತ್ತಿತ್ತು. 40 ಪರ್ಸೆಂಟ್ ಸರಕಾರವನ್ನು ತೊಡೆದು ಹಾಕಿ, ಮುಖ್ಯಮಂತ್ರಿಯಾಗಿರುವ ಸಿದ್ದರಾಮಯ್ಯ ಅವರ ಸರಕಾರಕ್ಕೆ ಬೆಂಬಲವನ್ನು ನೀಡಬಾರದು ಎನ್ನುವುದಕ್ಕೆ ಒಂದು ಕಾರಣವನ್ನು ನೀಡಲಿ. ಈ ಬಾರಿ ಕನಿಷ್ಠ 20 ಸೀಟುಗಳನ್ನು ಕಾಂಗ್ರೆಸ್ ಗೆಲ್ಲುವುದು ನಿಶ್ಚಿತ.

ಸರಕಾರದ ಗ್ಯಾರಂಟಿ ಯೋಜನೆಗಳಿಂದ ಜನರು ಸಂತೃಪ್ತರಾಗಿದ್ದಾರೆ. ಮೋದಿ ಮೋದಿ ಎಂದು ಹೇಳುತ್ತಿರಬಹುದು. ಆದರೆ ಈ ಚುನಾವಣೆಯಲ್ಲಿ ಈ ಬಾರಿ ಕಾಂಗ್ರೆಸ್ ಪರವಾಗಿ ಬಹುದೊಡ್ಡ ಮಟ್ಟದಲ್ಲಿ ಅಂಡರ್ ಕರೆಂಟ್ ವರ್ಕ್ ಆಗುತ್ತಿದೆ. ಈ ವಿಷಯವನ್ನು ಸ್ವತಃ ಬಿಜೆಪಿಗರೇ ನಮ್ಮೊಂದಿಗೆ ಹಂಚಿಕೊಂಡಿದ್ದಾರೆ.

- ಸರೋವರ ಶ್ರೀನಿವಾಸ್, ಅಧ್ಯಕ್ಷರು, ಕೆಎಸ್‌ಟಿಡಿಸಿ

● ದೇಶಕ್ಕೆ ಮೋದಿ ಗ್ಯಾರಂಟಿ ಎನ್ನುತ್ತಿದ್ದಾರೆ, ನಿಜವೇ?

ಪ್ರತಿ ಚುನಾವಣೆಯಲ್ಲಿ ಮೋದಿಯವರು ನೀಡಿರುವ ಎಷ್ಟು ಗ್ಯಾರಂಟಿ ಈಡೇರಿಸಿದ್ದಾರೆ? ಪ್ರತಿವರ್ಷ ಎರಡು ಲಕ್ಷ ಉದ್ಯೋಗ ಸೃಷ್ಟಿ ಮಾಡುವುದಾಗಿ ಹೇಳಿದ್ದರು. ಆದರೆ ಅದು ಜಾರಿಯಾಗಿಲ್ಲ. ನಾನು ಹೇಳುತ್ತಿರುವುದು ಒಂದೆರೆಡು ವಿಷಯ ಅದರೆ ಬಿಜೆಪಿಯವರು ಹೇಳಿರುವ ಯಾವ ಭರವಸೆಯನ್ನು ಈಡೇರಿಸಿದ್ದಾರೆ ಎನ್ನುವುದನ್ನು ಹೇಳಲಿ. ಪ್ರಧಾನ ಮಂತ್ರಿಯಾಗಿ ಹೇಳುವ ಮೊದಲು ಯೋಚಿಸುವ ಬದಲು, ಎಲ್ಲ ಭರವಸೆ ನೀಡಿ ಆಮೇಲೆ ಸುಮ್ಮನಾಗುವುದು ಸರಿಯೇ?

● ಜಯಪ್ರಕಾಶ್ ಹೆಗ್ಡೆ ಅವರಿಗೆ ವಿರೋಧವಿದೆಯಲ್ಲ?

ಚಿಕ್ಕಮಗಳೂರು-ಉಡುಪಿಯಲ್ಲಿ ಕಾಂಗ್ರೆಸ್ ಅಭ್ಯರ್ಥಿಗೆ ಎಲ್ಲಿಯೂ ವಿರೋಧವಿಲ್ಲ. ಆದರ